ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಬುಧವಾರ, ದಿನಾಂಕ: 09ನೇ ಡಿಸೆಂಬರ್, 2020

ರಸ್ತೆಗಳ ದುರಸ್ಥಿ ಕುರಿತು

ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು):-

176 (314) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕೋಲಾರ ಜಿಲ್ಲೆಯಲ್ಲಿರುವ ಲೋಕೋಪಯೋಗಿ ಇಲಾಖೆಯ ವ್ಯಾಪ್ತಿಗೆ ಒಳಪಡುವ ರಸ್ತೆಗಳು ಯಾವುವು ; (ರಾಜ್ಯ ಮತ್ತು ಜಿಲ್ಲಾ ಹೆದ್ದಾರಿಗಳ ಸಂಪೂರ್ಣ ಮಾಹಿತಿ ನೀಡುವುದು)

(ಆ) ಲೋಕೋಪಯೋಗಿ ಇಲಾಖೆಯ ರಸ್ತೆಗಳು ಸಂಪೂರ್ಣ ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಹಾಗಿದಲ್ಲಿ, ಕಳೆದ 3 ವರ್ಷಗಳಲ್ಲಿ ಈ ರಸ್ತೆಗಳ ದುರಸ್ಥಿ ಕಾಮಗಾರಿಗಾಗಿ ನಿಗಧಿಪಡಿಸಿ ಬಿಡುಗಡೆ ಮಾಡಿ ವೆಚ್ಚವಾಗಿರುವ ಮೊತ್ತವೆಷ್ಟು ; (ವರ್ಷವಾರು ಕಾಮಗಾರಿಗಳ ಮಾಹಿತಿ ನೀಡುವುದು)

(ಈ) ಸರ್ಕಾರ ನಿಗಧಿಪಡಿಸಿ ಬಿಡುಗಡೆ ಮಾಡಿರುವ ಅನುದಾನದಲ್ಲಿ ಪೂರ್ಣಗೊಂಡಿರುವ ಕಾಮಗಾರಿಗಳೆಷ್ಟು ಮತ್ತು ಅಪೂರ್ಣಗೊಂಡಿರುವ ಕಾಮಗಾರಿಗಳೆಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಉ) ಅಪೂರ್ಣಗೊಂಡಿರುವ ಕಾಮಗಾರಿಗಳನ್ನು ಯಾವ ಕಾಲ ಮಿತಿಯೊಳಗಾಗಿ ಪೂರ್ಣಗೊಳಿಸಲಾಗುವುದು ? (ಸಂಪೂರ್ಣ ಮಾಹಿತಿ ನೀಡುವುದು)